ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 75 ಗ್ರಾಪಸ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:05-02-2020.

## ಸುತ್ತೋಲೆ

**ವಿಷಯ:** 14ನೇ ಹಣಕಾಸು ಆಯೋಗ ಅನುದಾನವನ್ನು ವಿನಿಯೋಗಿಸುವ ಕುರಿತು.

**ಉಲ್ಲೇಖ:** 1. ಸರ್ಕಾರದ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ: 04-02-2019.

2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 02 ಗ್ರಾಪಸ 2019, ದಿನಾಂಕ:21-01-2019.

*****

ಉಲ್ಲೇಖ (1)ರ ಸುತ್ತೋಲೆಯನ್ವಯ 14ನೇ ಹಣಕಾಸು ಅನುದಾನಕ್ಕೆ ಪೂರ್ಣ ವರ್ಷದ ವಾರ್ಷಿಕ ಕ್ರಿಯಾ ಯೋಜನೆ ತಯಾರಿಸಿ ಪ್ಲಾನ್‌ಪ್ಲಸ್ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಪ್‌ಲೋಡ್ ಮಾಡಿದ ನಂತರ ಕ್ರಿಯಾ ಯೋಜನೆಯನ್ನು ಅನುಷ್ಠಾನಗೊಳಿಸುವಂತೆ ಸೂಚಿಸಲಾಗಿದೆ. ಆದಾಗ್ಯೂ ಕೆಲವು ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮೊದಲನೇ ಕಂತಿನಲ್ಲಿ ಬಿಡುಗಡೆಯಾದ ಅನುದಾನಕ್ಕೆ ಮಾತ್ರ ಕ್ರಿಯಾಯೋಜನೆಯನ್ನು ಸಿದ್ಧಪಡಿಸಿ ಅನುಷ್ಠಾನಗೊಳಿಸುತ್ತಿದ್ದು, ಎರಡನೇ ಕಂತಿನ ಅನುದಾನಕ್ಕೆ ಪ್ರತ್ಯೇಕವಾಗಿ ಕ್ರಿಯಾಯೋಜನೆ ಸಿದ್ಧಪಡಿಸಿ ಅನುಮೋದನೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದರೆ, ಪೂರ್ಣ ವರ್ಷಕ್ಕೆ ಒಂದೇ ಬಾರಿ ವಾರ್ಷಿಕ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದುಕೊಂಡು ಕ್ರಿಯಾ ಯೋಜನೆಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಬೇಕಾಗಿದೆ. 2019-20ನೇ ಸಾಲಿನ 2ನೇ ಕಂತಿನ ಅನುದಾನ ಬಿಡುಗಡೆಯಾಗಿದ್ದರೂ ಕೂಡಾ ಇದುವರೆವಿಗೂ ಹಲವಾರು ಜಿಲ್ಲೆಗಳಲ್ಲಿ ಕ್ರಿಯಾಯೋಜನೆಗಳನ್ನು ಅನುಮೋದಿಸಿ ಪ್ಲಾನ್‌ಪ್ಲಸ್ ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಿರುವುದಿಲ್ಲ. 14ನೇ ಹಣಕಾಸು ಆಯೋಗದ ಅನುದಾನಕ್ಕೆ ಇದು ಅಂತಿಮ ವರ್ಷವಾಗಿದ್ದು, ಈ ಸಾಲಿನಲ್ಲಿ ಬಿಡುಗಡೆಯಾಗಿರುವ ಅನುದಾನವನ್ನು ಮಾರ್ಚ್-31ರೊಳಗೆ ಸಂಪೂರ್ಣವಾಗಿ ಬಳಸಿಕೊಳ್ಳಬೇಕಾಗುತ್ತದೆ.

ಎಸ್ಕಾಂಗಳಿಗೆ ಪಾವತಿ ಮಾಡಬೇಕಾದ ಶೇ.25ರಷ್ಟು ಅನುದಾನವನ್ನು ಕ್ರಿಯಾಯೋಜನೆಯಲ್ಲಿ ಮೀಸಲಿಟ್ಟುಕೊಂಡಿದ್ದರೂ ಕೂಡಾ ಕ್ರಿಯಾಯೋಜನೆಗಳಿಗೆ ಅನುಮೋದನೆ ನೀಡುವಲ್ಲಿನ ವಿಳಂಬದಿಂದಾಗಿ ಎಸ್ಕಾಂಗಳಿಗೆ ಅನುದಾನ ಪಾವತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ ಕ್ರಿಯಾಯೋಜನೆಗೆ ಅನುಮೋದನೆಯನ್ನು ಮುಖ್ಯ ಕಾರ್ಯನಿರ್ವಾಹಕಾಧಿಕಾರಿಯವರಿಂದ ನಿರೀಕ್ಷಿಸಿ ಉಲ್ಲೇಖ(2)ರ ಆದೇಶದಲ್ಲಿ ಸೂಚಿಸಿರುವ ಪದ್ಧತಿಯನ್ನು ಅನುಸರಿಸಿ ಎಲ್ಲಾ ಗ್ರಾಮ ಪಂಚಾಯಿತಿಗಳು ವಿದ್ಯುತ್ ಬಿಲ್ಲುಗಳನ್ನು ಎಸ್ಕಾಂಗಳಿಗೆ ಕೂಡಲೇ ಪಾವತಿಸಲು ಸೂಚಿಸಿದೆ.

05/02/2020
(ಸಿ. ಮಂಜುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

05.02.2020

ಇವರಿಗೆ:

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)

3. ಎಲ್ಲಾ ಗ್ರಾಮ ಪಂಚಾಯತಿ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರ ಮಾಹಿತಿಗಾಗಿ.
3. ನಿರ್ದೇಶಕರು (ಪಂ.ರಾಜ್-1 ಮತ್ತು 2) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
4. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ